**Akashvani : Bangalore**
**Regional Bulletin In Kannada**
**11.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**11.01.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ದೇಶೀಯ ನವೋದ್ಯಮಗಳ ಪೋಷಿಸುವತ್ತ ಬಿಇಎಲ್ ಗಮನ ಹರಿಸಬೇಕಿದೆ - ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್

೨. ರಾಜ್ಯ ಸರ್ಕಾರದಿಂದ ಈ ಹಿಂದೆ ಕೈಗೊಂಡ ಜಾತಿಗಣತಿ ಈಗ ಅಪ್ರಸ್ತುತ- ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ

೩. ವಿಜಯಪುರದ ಬಳಿ ಮೈಸೂರು ಸ್ಯಾಂಡಲ್ ಸೋಪ್ ಉತ್ಪಾದನಾ ಘಟಕ ಸ್ಥಾಪನೆಗೆ ೧೦ ಎಕರೆ ಜಮೀನು

೪. ದೇಶದಲ್ಲಿ ಹಸಿರು ಹೈಡ್ರೋಜನ್ ಉತ್ಪಾದನೆಗೆ ವಿಶೇಷ ಒತ್ತು - ಕೇಂದ್ರ ಪೆಟ್ರೋಲಿಯಂ ಸಚಿವ

**<><*<><>*><>**

ಸ್ಥಳೀಯ ಘಟಕ ಅಭಿವೃದ್ಧಿಯ ಅಗತ್ಯವಿರುವ ದೇಶೀಯ ನವೋದ್ಯಮಗಳನ್ನು ಗುರುತಿಸುವುದು ಮತ್ತು ಪೋಷಿಸುವತ್ತ ಭಾರತ್ ಎಲಿಕ್ಟ್ರಿಕಲ್ಸ್ ಲಿಮಿಟೆಡ್-ಬಿಇಎಲ್ ಗಮನಹರಿಸಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ - ಬಿಇಎಲ್ ಆಯೋಜಿಸಿದ್ದ ಸಮಾರಂಭದಲ್ಲಿ ಭಾಗವಹಿಸಿದ್ದ ಅವರು, ಬಿಇಎಲ್ ಸಂಶೋಧನಾ ಮತ್ತು ಅಭಿವೃದ್ಧಿ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ನಂತರ ಮಾತನಾಡಿದ ಅವರು, ವಿನ್ಯಾಸದಿಂದ ಉತ್ಪಾದನೆಯವರೆಗೆ ಸೆಮಿಕಂಡಕ್ಟರ್ ಕ್ರಾಂತಿಯನ್ನು ಮುನ್ನಡೆಸುತ್ತಾ ಹಾಗೂ ಪರಸ್ಪರ ಜ್ಞಾನ ವಿನಿಮಯ ಮೂಲಕ ಜಾಗತಿಕ ಪೂರೈಕೆ ಸರಪಳಿಗಳಲ್ಲಿ ಭಾರತದ ಸ್ಥಾನವನ್ನು ಸ್ಥಾಪಿಸುವತ್ತಾ ಬಿಇಎಲ್ ಗಮನಹರಿಸಬೇಕು ಎಂದರು.

ಧ್ವನಿ: ಉಪರಾಷ್ಟ್ರಪತಿ

ಇದಕ್ಕೂ ಮುನ್ನ ಬೆಂಗಳೂರಿನಲ್ಲಿಂದು ಎಲ್ಲಾ ರಾಜ್ಯಗಳ ಲೋಕಸೇವಾ ಆಯೋಗಗಳ ೨೫ನೇ ರಾಷ್ಟ್ರೀಯ ಸಮ್ಮೇಳನವನ್ನು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಉದ್ಘಾಟಿಸಿದರು. ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾರ್ವಜನಿಕ ಸೇವಕರು ಆಡಳಿತದ ಬೆನ್ನೆಲುಬಾಗಿ, ರಾಜಕೀಯ ದೃಷ್ಟಿಕೋನವನ್ನು ನೆಲದ ವಾಸ್ತವಕ್ಕೆ ಪರಿವರ್ತಿಸುವ ಕಾರ್ಯಕಾರಿ ಸ್ತಂಭಗಳಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು. ೨೦೪೭ ರ ವೇಳೆ ವಿಕಸಿತ ಭಾರತ ದೃಷ್ಟಿಕೋನವನ್ನು ಸಾಧಿಸಲು ನಮಗೆ ಪಾರದರ್ಶಕ ಮತ್ತು ತಾಂತ್ರಿಕವಾಗಿ ಸುಸಜ್ಜಿತ ಅಧಿಕಾರಶಾಹಿ ಅಗತ್ಯವಿದೆ. ಸಾರ್ವಜನಿಕ ಸೇವಾ

ಆಯೋಗಗಳು, ಸಾರ್ವಜನಿಕ ಸೇವೆಗಾಗಿ ಅತ್ಯುತ್ತಮ ಮಾನವ ಸಂಪನ್ಮೂಲಗಳನ್ನು ಆಯ್ಕೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ ಎಂದು ಹೇಳಿದರು. ಸಾರ್ವಜನಿಕ ನೇಮಕಾತಿಗಳು ನ್ಯಾಯಯುತವಾಗಿರುವುದನ್ನು ಖಚಿತಪಡಿಸಿಕೊಳ್ಳಲು, ವಿಶೇಷವಾಗಿ ಪರೀಕ್ಷೆಗಳು ಮತ್ತು ಸಂದರ್ಶನಗಳನ್ನು ನಡೆಸುವಲ್ಲಿ ಪಾರದರ್ಶಕತೆ ಮತ್ತು ಸಾರ್ವಜನಿಕ ಹೊಣೆಗಾರಿಕೆಯ ಅಂಶವನ್ನು ಹೆಚ್ಚಿಸುವುದು ನಿರ್ಣಾಯಕವಾಗಿದೆ ಎಂದು ಒತ್ತಿ ಹೇಳಿದರು. ಬಳಿಕ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಬಿಎಚ್‌ಇಎಲ್‌ಗೆ ಭೇಟಿ ನೀಡಿ, ವಿಜ್ಞಾನಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು.

**<><*<><>*><>**

ರಾಜ್ಯ ಸರ್ಕಾರದಿಂದ ಈಗಾಗಲೇ ಜಾತಿ ಗಣತಿ ಮಾಡಿ, ಸುಮಾರು ೧೨ ವರ್ಷಗಳು ಕಳೆದಿದ್ದು, ಈ ವರದಿ ಈಗ ಪ್ರಸ್ತುತವಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅಭಿಪ್ರಾಯಪಟ್ಟರು.  ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಹಾಡೋನಹಳ್ಳಿಯಲ್ಲಿ ಇತ್ತೀಚೆಗೆ ನಿಧನರಾದ ಜೆಡಿಎಸ್ ಹಿರಿಯ ಮುಖಂಡ ಎಚ್.ಅಪ್ಪಯ್ಯಣ್ಣ ಅವರ ನುಡಿ ನಮನ ಕಾರ್ಯಕ್ರಮ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.  ೧೦ ವರ್ಷಗಳಿಗೊಮ್ಮೆ ಜಾತಿ ಗಣತಿ ಮಾಡಬೇಕು. ಹೊಸದಾಗಿ ರಾಜ್ಯ ಸರ್ಕಾರ ಜಾತಿ ಗಣತಿ ಮಾಡುವುದಾದರೆ ಮಾಡಲಿ. ಇಲ್ಲದಿದ್ದಲ್ಲಿ ಕೇಂದ್ರ ಸರ್ಕಾರ ಮಾಡುವ ತನಕವಾದರೂ ಕಾಯಬೇಕು. ೧೨ ವರ್ಷಗಳ ಹಿಂದೆ ಮಾಡಿದ ಜಾತಿಗಣತಿಯನ್ನು ಈಗ ಅನುಷ್ಠಾನಕ್ಕೆ ತರುವುದು ಅವೈಜ್ಞಾನಿಕ. ಅದರ ಸಾಧಕ-ಭಾದಕಗಳನ್ನು ಚರ್ಚಿಸಬೇಕಿದೆ ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

**<><*<><>*><>**

ವಿಜಯಪುರ ನಗರದ ಹೊರವಲಯದ ಇಟ್ಟಂಗಿಹಾಳ ಗ್ರಾಮದ ಬಳಿ ಮೈಸೂರು ಸ್ಯಾಂಡಲ್ ಸೋಪ್ ಉತ್ಪಾದನೆ ಘಟಕ ಸ್ಥಾಪಿಸಲು ೧೦ ಎಕರೆ ಜಮೀನು ನೀಡುವುದಾಗಿ ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರ ನಗರದಲ್ಲಿ ಇಂದು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಆಯೋಜಿಸಿರುವ ಮೈಸೂರು ಸ್ಯಾಂಡಲ್ ಸಾಬೂನು ಮೇಳ ಉದ್ಘಾಟಿಸಿ ಅವರು ಮಾತನಾಡಿದರು. ಮೈಸೂರು ಮಹಾರಾಜರು ನೀರಾವರಿಗಾಗಿ ಕೆ.ಆರ್.ಎಸ್. ಅಣೆಕಟ್ಟು, ಕೈಗಾರಿಕೆಗಾಗಿ ಕೆ.ಎಸ್.ಡಿ.ಎಲ್. ಮತ್ತು ಶಿಕ್ಷಣಕ್ಕಾಗಿ ನಾನಾ ಸಂಸ್ಥೆಗಳನ್ನು ಪ್ರಾರಂಭಿಸಿ, ರಾಜ್ಯದ ಅಭಿವೃದ್ಧಿಗೆ ಮುನ್ನುಡಿ ಬರೆದಿದ್ದಾರೆ. ಅವರು ಪ್ರಾರಂಭಿಸಿರುವ ಮೈಸೂರು ಸ್ಯಾಂಡಲ್ ಸೋಪ್ ಜಗತ್ತಿನಾದ್ಯಂತ ಜನಪ್ರಿಯತೆ ಪಡೆದಿದೆ ಎಂದರು.  ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಕಲಾ ಲೋಕ ಸ್ಥಾಪಿಸಿ, ಅಲ್ಲಿ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ ಉತ್ಪನ್ನಗಳನ್ನು ಪರಿಚಯಿಸಲಾಗುವುದು ಎಂದು ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

**<><*<><>*><>**

ದೇಶದಲ್ಲಿ ಹಸಿರು ಹೈಡ್ರೋಜನ್ ಉತ್ಪಾದನೆ ಮತ್ತು ಬಳಕೆಗೆ ವಿಶೇಷ ಒತ್ತು ನೀಡಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಖಾತೆ ಸಚಿವ ಹರ್‌ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಭಾರತ್ ಫೌಂಡೇಶನ್ ವತಿಯಿಂದ ಮಂಗಳೂರಿನಲ್ಲಿ ನಡೆಯುತ್ತಿರುವ ಲಿಟ್ ಫೆಸ್ಟ್‌ನಲ್ಲಿಂದು ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಶಾಲಿ ರಾಷ್ಟ್ರವಾಗುವತ್ತ ದಾಪುಗಾಲಿಕ್ಕುತ್ತಿದೆ. ಈ ಸಂದರ್ಭದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿ ಪ್ರಗತಿ ಸಾಧಿಸಬೇಕಾದ್ದು

ಅತ್ಯವಶ್ಯಕವಾಗಿದೆ ಎಂದರು. ಕಳೆದ ಮೂರು ವರ್ಷಗಳಲ್ಲಿ ಇಂಧನ ಬೆಲೆ ಕಡಿಮೆಯಾದ ಜಗತ್ತಿನ ಏಕೈಕ ರಾಷ್ಟ್ರ ಭಾರತ. ಪ್ರಸ್ತುತ ದೇಶದಲ್ಲಿ ಒಟ್ಟು ೧೪೦ ಮಿಲಿಯನ್ ಎಲ್‌ಪಿಜಿ ಸಂಪರ್ಕ ನೀಡಲಾಗಿದೆ. ಶೇಕಡಾ ೬೭ರಷ್ಟು ಜನರು ಪೆಟ್ರೋಲ್ ಪಂಪ್‌ಗಳಲ್ಲಿ ಇಂಧನ ಪಡೆಯುತ್ತಿದ್ದು, ವರ್ಷಕ್ಕೆ ೨೬೦ ರಿಂದ ೨೭೦ ಮಿಲಿಯನ್ ಮೆಟ್ರಿಕ್‌ಟನ್ ಇಂಧನ ಸಂಸ್ಕರಣೆ ಸಾಮರ್ಥ್ಯ ಹೊಂದಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಧ್ವನಿ: ಹರ್‌ದೀಪ್ ಸಿಂಗ್ ಪುರಿ

**<><*<><>*><>**

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದ ಪೀಠದ ಶ್ರೀ ಭಾರತಿತೀರ್ಥ ಮಹಾಸ್ವಾಮೀಜಿಯವರು ಸನ್ಯಾಸತ್ವ ಸ್ವೀಕರಿಸಿ ಇಂದಿಗೆ ೫೦ ವರ್ಷಗಳು ಕಳೆದಿದ್ದು, ಇದರ ಪ್ರಯುಕ್ತ ಮಠದಲ್ಲಿ ಇಂದು ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು. ಮಠದ ಆವರಣದಲ್ಲಿ ಸುಮಾರು ೫೦ ಸಾವಿರ ಭಕ್ತರು ಏಕಕಾಲಕ್ಕೆ ಸ್ತೋತ್ರ ಪಠಣ ಮಾಡಿ ದಾಖಲೆ ನಿರ್ಮಿಸಿದ್ದರು. ಇದರ ಜೊತೆಗೆ ಶ್ರೀ ಶಂಕರ ತತ್ವ ಪ್ರಸಾರ ಅಭಿಯಾನ, ಶಾರದಾಂಬೆ ಮತ್ತು ಶಂಕರಚಾರ್ಯರಿಗೆ ವಿಶೇಷ ಪೂಜೆ, ಮಠದ ಭಾರತೀತೀರ್ಥ ಸ್ವಾಮೀಜಿ ಹಾಗೂ ವಿಧುಶೇಖರ ಸ್ವಾಮೀಜಿ ಅವರಿಂದ ಆಶೀರ್ವಚನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ನಾವು ಮಠಗಳನ್ನು ಮತ್ತು ಧರ್ಮವನ್ನು ಕಾಪಾಡಬೇಕಿದೆ. ರಾಜ್ಯದಲ್ಲಿ ಶೃಂಗೇರಿ ಶಾರದಾಂಬೆ ಮಠಕ್ಕೆ ಅದರದೇ ಆದ ಪರಂಪರೆ ಹಾಗೂ ಇತಿಹಾಸವಿದೆ. ಶ್ರೀ ಭಾರತಿತೀರ್ಥ ಮಹಾಸ್ವಾಮೀಜಿಯವರು ರಾಜಕಾರಾಣದಲ್ಲಿ ಎಂದಿಗೂ ಹಸ್ತಕ್ಷೇಪ ಮಾಡದೆ, ಧರ್ಮದ ಕೆಲಸವನ್ನು ಮಾಡಿದ್ದು, ನಾಡಿಗೆ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

**<><*<><>*><>**

ಕೊಪ್ಪಳದ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದಲ್ಲಿ ಜಾಗೃತಿ ಜಾಥಾ ಮುಂದಿನ ಭವಿಷ್ಯದ ದಿಕ್ಸೂಚಿ ಎಂದು ಗವಿಸಿದ್ಧೇಶ್ವರ ಮಠದ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹೇಳಿದ್ದಾರೆ. ಕೊಪ್ಪಳ ನಗರದಲ್ಲಿ ಇಂದು ನಡೆದ 'ವಿಶೇಷಚೇತನರ ನಡಿಗೆ ಸಕಲಚೇತನರ ಕಡೆಗೆ' ಹೆಸರಿನ ಜಾಗೃತಿ ಜಾಥಾ ಉದ್ಘಾಟಿಸಿ ಮಾತನಾಡಿದ ಅವರು, ಅಜ್ಜನ ಜಾತ್ರೆಯ ತೇರು ಎಳೆಯುವುದಕ್ಕಿಂತ ಜಾಗೃತಿ ಜಾಥಾದ ವಿದ್ಯಾರ್ಥಿಗಳ ಹೆಜ್ಜೆಗಳು ದೊಡ್ಡವು. ಇವು ಬರುವ ಪೀಳಿಗೆಗೆ ಹೆಜ್ಜೆಗುರುತಾಗಬೇಕು. ಸಾಮಾಜಿಕ ಕಳಕಳಿ ತೋರಿಕೆಗೆ ಆಗದೇ ನಿಜಕ್ಕೂ ಅದು ಸಾಕಾರಗೊಳ್ಳಬೇಕು ಎಂದರು.

**<><*<><>*><>**

ನಾಗಾಲ್ಯಾಂಡ್ ಬಳಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಹುತಾತ್ಮರಾಗಿದ್ದ ಯೋಧ ರವಿ ತಳವಾರ ಪಾರ್ಥಿವ ಶರೀರವನ್ನು ಇಂದು ಸ್ವ-ಗ್ರಾಮ ಬೆಳಗಾವಿ ತಾಲೂಕಿನ ನಿಂಗ್ಯಾನಟ್ಟಿ ಗ್ರಾಮದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು. ಎರಡು ದಿನಗಳ ಹಿಂದೆ ನಾಗಾಲ್ಯಾಂಡ್‌ನಲ್ಲಿ ಕಂದಕಕ್ಕೆ ಉರಳಿದ ಸೇನಾ ವಾಹನ ಅಪಘಾತಕ್ಕೀಡಾಗಿತ್ತು. ಅಪಘಾತದಲ್ಲಿ ರವಿ ಸೇರಿ ಮೂವರು ಯೋಧರು ಹುತಾತ್ಮರಾಗಿದ್ದರು. ಹುತಾತ್ಮ ಯೋಧ ರವಿ ನಾಗಾಲ್ಯಾಂಡ್ ರೈಫಲ್ಸ್‌ನಲ್ಲಿ ಕಳೆದ ೧೬ ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರು.

**<><*<><>*><>**

ಕಿತ್ತೂರು ರಾಣಿ ಚನ್ನಮ್ಮನ ಬಲಗೈ ಬಂಟನಾಗಿ ಬ್ರಿಟಿಷರಿಗೆ ಸಿಂಹಸ್ವಪ್ನವಾಗಿ ಕಾಡಿದ್ದ ಹೋರಾಟಗಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಉತ್ಸವ ನಾಳೆಯಿಂದ ಎರಡು ದಿನಗಳವರೆಗೆ ಬೈಲಹೊಂಗಲ ತಾಲೂಕಿನ ರಾಯಣ್ಣನ ಜನ್ಮಸ್ಥಳ ಸಂಗೊಳ್ಳಿಯಲ್ಲಿ ನಡೆಯಲಿದೆ. ನಾಳೆ ಮುಂಜಾನೆ ಕಿತ್ತೂರು ಸಂಸ್ಥಾನ ಧ್ವಜಾರೋಹಣ, ರಾಯಣ್ಣನ ಪ್ರತಿಮೆಗೆ ಮಾಲಾರ್ಪಣೆ, ಜಾನಪದ ಕಲಾವಾಹಿನಿ ಮೆರವಣಿಗೆ, ವಸ್ತುಪ್ರದರ್ಶನ ಕಾರ್ಯಕ್ರಮಗಳು ಜರುಗಲಿವೆ. ಸಂಜೆ ೮ ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಉತ್ಸವದ ಅಧಿಕೃತ ಉದ್ಘಾಟನೆ ನೆರವೇರಿಸಲಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಮರುದಿನ ಸಂಜೆ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ವೀರರ ಸ್ಮರಣಾರ್ಥ ದೀಪೋತ್ಸವ, ರಾಯಣ್ಣನ ಕುರಿತಾದ ವಿಚಾರ ಸಂಕಿರಣ, ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿ ಸೇರಿದಂತೆ ಇತರೆ ಸ್ಪರ್ಧೆಗಳು ನಡೆಯಲಿವೆ.

<><*<><>*><>

ತುಮಕೂರು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಅಧಿಕಾರಿಗಳು ಕಾರ್ಯೋನ್ಮುಖವಾಗಬೇಕು ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸೂಚಿಸಿದರು. ಕೊರಟಗೆರೆ ತಾಲೂಕು ಕೋಳಾಲದಲ್ಲಿ ನಡೆದ ಕೇಂದ್ರ ಸರ್ಕಾರದ ಸವಲತ್ತುಗಳ ವಿತರಣೆ ಹಾಗೂ ಜನ ಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಅಗತ್ಯ ಅನುದಾನವನ್ನು ಕೇಂದ್ರ ಸರ್ಕಾರ ನೀಡಲಿದೆ ಎಂದರು. ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಲಾಯಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**